ಸಮಾಜ ಕಲ್ಯಾಣಾಧಿಕಾರಿ ವೃಂದದಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬುವುದು.

438 (379) ಶ್ರೀ ಪ್ರತಾಪಗೌಡ ಪಾಟೀಲ್ (ಮಸ್ಕಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಯಚೂರು ಜಿಲ್ಲೆಯ ಬಹುತೇಕ ಸಮಾಜ ಕಲ್ಯಾಣಾಧಿಕಾರಿಗಳ ಹುದ್ದೆ ಖಾಲಿಯಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಯಾವ ಕ್ರಮ ತೆಗೆದುಕೊಳ್ಳಲಾಗುವುದು?

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ) ರಾಯಚೂರು ಜಿಲ್ಲೆಯಲ್ಲಿ ತಾಲ್ಲೂಕು ಸಮಾಜ ಕಲ್ಯಾಣ ಅಧಿಕಾರಿ ವೃಂದದಲ್ಲಿ 04 ಹುದ್ದೆಗಳು ಖಾಲಿ ಇರುತ್ತವೆ. ಪರಿಶಿಷ್ಟ ಜಾತಿಗಳ ಕಲ್ಯಾಣ ಇಲಾಖೆಯಲ್ಲಿ ಉಲ್ಲೇಖಿತ ವೃಂದದಲ್ಲಿ ಖಾಲಿ ಇರುವ ಒಟ್ಟು 88 ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ತುಂಬಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಆಯ್ಕೆ ಪ್ರಕ್ರಿಯೆ ಪ್ರಗತಿಯಲ್ಲಿದೆ. ಅಭ್ಯರ್ಥಿಗಳ ಆಯ್ಕೆ ಪಟ್ಟಿ ಸ್ವೀಕರಿಸಿದ ನಂತರ ಈ ಹುದ್ದೆಗಳಿಗೆ ನೇಮಕಾತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

439 (955) ಶ್ರೀ ಪ್ರಿಯಾಕೃಷ್ಣ (ಗೋವಿಂದರಾಜ ನಗರ) : ಮಾನ್ಯ ಮಹಿಳಾ ಮತ್ತು ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗೋವಿಂದರಾಜ ನಗರ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ;

ಆ) ಇವುಗಳಲ್ಲಿ ತರಬೇತಿ ಪಡೆಯುತ್ತಿರುವ ಮಹಿಳೆಯರ ಸಂಖ್ಯೆ ಎಷ್ಟು;

ಇ) ತರಬೇತಿ ನಂತರ ಹೊಲಿಗೆ ಯಂತ್ರ ಮತ್ತು ಇನ್ನಿತರ ಪರಿಕರಣೆಗಳನ್ನು ಒದಗಿಸಲಾಗುತ್ತಿದೆಯೇ?

ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು) :

ಅ) ಗೋವಿಂದರಾಜ ನಗರ ಮತಕ್ಷೇತ್ರದ ವ್ಯಾಪ್ತಿಯಲ್ಲಿ 20 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ;

ಆ) ಅಂಗನವಾಡಿ ಕೇಂದ್ರಗಳಲ್ಲಿ ಮಹಿಳೆಯರಿಗೆ ಯಾವುದೇ ರೀತಿಯ ತರಬೇತಿ ನೀಡುವ ಯೋಜನೆ ಇರುವುದಿಲ್ಲ.

ಇ) ಅನ್ವಯಿಸುವುದಿಲ್ಲ.

ಅಂಗವಿಕಲರ/ವೇದ್ಧಾಷ್ಯ ವೇತನದ ಬಗ್ಗೆ

440 (956) ಶ್ರೀ ಪ್ರಿಯಕೃಷ್ಣ (ಗೋವಿಂದರಾಜ ನಗರ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗೋವಿಂದರಾಜ ನಗರ ಕ್ಷೇತ್ರದ ವ್ಯಾಪ್ತಿಯಲ್ಲಿ ಸಂಧ್ಯಾ ಸುರಕ್ಷಾ ಯೋಜನೆ, ವಿಧಾವ ವೇತನ ಮತ್ತು ಅಂಗವಿಕಲ ವೇತನವನ್ನು ಎಷ್ಟು ಫಲಾನುಭವಿಗಳಿಗೆ ನೀಡಲಾಗಿದೆ.

ಆ) ಈ ಯೋಜನೆಯಡಿಯಲ್ಲಿ ಎಷ್ಟು ಫಲಾನುಭವಿಗಳಿಗೆ ವೇತನ ನೀಡುವ ಅರ್ಜಿಗಳು ಬಾಕಿ ಇವೆ;

ಇ) ಸರಿಯಾದ ಸಮಯಕ್ಕೆ ವೇತನ ನೀಡುವಲ್ಲಿ ಆಗಿರುವ ವಿಳಂಬಕ್ಕೆ ಕಾರಣವೇನು;

ಈ) ಈ ಯೋಜನೆಯಡಿಯಲ್ಲಿ ಬರುವ ಫಲಾನುಭವಿಗಳಿಗೆ ವೇತನ ನೀಡುವಲ್ಲಿ ಆಗಿರುವ ತಾರತಮ್ಯಕ್ಕೆ ಕಾರಣವೇನು;

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು) :

ಅ) ಗೋವಿಂದರಾಜ ನಗರ ಕ್ಷೇತ್ರದ ವ್ಯಾಪ್ತಿಯಲ್ಲಿ ಸಂಧ್ಯಾ ಸುರಕ್ಷಾ ಯೋಜನೆಯಡಿಯಲ್ಲಿ 2289, ವಿಧಾವ ವೇತನ ಯೋಜನೆಯಡಿ 1058 ಮತ್ತು ಅಂಗವಿಕಲ ವೇತನ ಯೋಜನೆಯಡಿಯಲ್ಲಿ 482 ಫಲಾನುಭವಿಗಳು ಮಾಸಾಶನ ಪಡೆಯುತ್ತಿರುತ್ತಾರೆ.

ಆ) ಸಂಧ್ಯಾ ಸುರಕ್ಷಾ, ವಿಧವಾ ಮತ್ತು ಅಂಗವಿಕಲ ವೇತನ ಯೋಜನೆಗಳಡಿಯಲ್ಲಿ 480 ಅರ್ಜಿಗಳು ಬಾಕಿ ಇರುತ್ತವೆ.